**ಸಾಕ್ಷಿಯನ್ನು ಕರೆಸಲಾಯಿತು** **ಪ್ರಮಾಣ ವಚನ ಮಾಡಿಸಲಾಯಿತು.**

**ದಿಃ 10.08.2026.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಎಸ್ ವಿ ಎಸ್ ವಕೀಲರಿಂದ**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ವಿಷಯಗಳು ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ.

1. ಅಗನಿ ಗ್ರಾಮದ ಸ ನಂ 222/2 ರ ಪಹಣಿ ಪತ್ರಿಕೆಯನ್ನು ನಿಪಿ.1 ಎಂದು ಗುರುತಿಸಲಾಯಿತು.
2. ಮ್ಯುಟೇಷನ್ ರಿಜಿಸ್ಟರ್ ನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.2 ಎಂದು ಗುರುತಿಸಲಾಯಿತು.
3. ಅಗನಿ ಗ್ರಾಮದ ಸ ನಂ 222/2 ರ 2 ಕೈಬರಹ ಪಹಣಿ ಪತ್ರಿಕೆಗಳ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ಒಟ್ಟಾಗಿ ನಿ.ಪಿ.3 ಎಂದು ಗುರುತಿಸಲಾಯಿತು.
4. ಖಾತೆಯ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.4 ಎಂದು ಗುರುತಿಸಲಾಯಿತು.
5. ಮ್ಯುಟೇಷನ್ ರಿಜಿಸ್ಟರ್ ನ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.5 ಎಂದು ಗುರುತಿಸಲಾಯಿತು.
6. ವಂಶವೃಕ್ಷದ ನೋಟರಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.6 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದ್ದು, ನೀಡಿ ಮುಂದೂಡಲಾಯಿತು.**
**ಉಕ್ತ ಲೇಖನದಂತೆ ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಓ ಹೇ ಕೇ ಸ ಇ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ ಸಕಲೇಶಪುರ**